## ದಿನಾಂಕ:-02-12-2022 (ಶುಕ್ರವಾರ) ರಂದು ವಾರ್ಡ್ ಸಂಖ್ಯೆ : 161 ಅತ್ತಿಗುಪ್ಪೆ ವಾರ್ಡ್ ಸಮಿತಿ ಸಭೆ ನಡವಳಿಗಳು

*********

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವಾರ್ಡ್ ಸಂಖ್ಯೆ : 161 ಅತ್ತಿಗುಪ್ಪೆ ವಾರ್ಡ್ ಸಮಿತಿ ಸಭೆಯು ದಿನಾಂಕ:-02-12-2022 ಶುಕ್ರವಾರ 10.30 ಗಂಟೆಗೆ ನೋಡಲ್ ಅಧಿಕಾರಿರವರ ಅಧ್ಯಕ್ಷತೆಯಲ್ಲಿ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು, ಗಾಳಿ ಆಂಜನೇಯ ಸ್ವಾಮಿ ದೇವಸ್ಥಾನ ಉಪ ವಿಭಾಗದ ಕಛೇರಿಯಲ್ಲಿ ನಡೆದಿರುತ್ತದೆ.

<u>ಸಭೆಗೆ ಹಾಜರಾಗಿ ಭಾಗವಹಿಸಿದ ಸದಸ್ಯರು ಮತ್ತು ಸಾರ್ವಜನಿಕರ ವಿವರ</u>

| ಕ್ರ.ಸಂ | ಅಧಿಕಾರಿಗಳು ಮತ್ತು ಸದಸ್ಯರ ಹೆಸರು | ಪದನಾಮ | ಇಲಾಖೆ | ಹಾಜರಾತಿ |
|---|---|---|---|---|
| 1 | ಶ್ರೀ. ರಾಧಾಕೃಷ್ಣ | ನೋಡಲ್ ಅಧಿಕಾರಿ | ಕಾರ್ಯಪಾಲಕ ಅಭಿಯಂತರರು ಚಾಮರಾಜಪೇಟೆ ವಿಭಾಗ | ಹಾಜರಾಗಿರುತ್ತಾರೆ |
| 2 | ಶ್ರೀ. ಮಾರುತಿ ಸೇಟ್ | ಸದಸ್ಯರು | ಹಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್ ಸಂಖ್ಯೆ : 132 ಅತ್ತಿಗುಪ್ಪೆ | ಹಾಜರಾಗಿರುತ್ತಾರೆ |
| 3 | ಶ್ರೀ. ಸಂದೀಪ್ ಕುಮಾರ್ | ಸದಸ್ಯರು | ಕಿ.ಆ.ಪರಿವೀಕ್ಷಕರು | ಹಾಜರಾಗಿರುತ್ತಾರೆ |
| 4 | ಶ್ರೀ. ಸ್ವಾಮಿಗೌಡ | ಸದಸ್ಯರು | ಹೆಲ್ತ್ ಇನ್ಸಪೆಕ್ಟರ್ | ಹಾಜರಾಗಿರುತ್ತಾರೆ |
| 5 | ಕು॥ ಅನನ್ಯ.ಬಿ.ಕೆ. | ಸದಸ್ಯರು | ಸ.ಅ.(ಗುತ್ತಿಗೆ ಆಧರದ ಮೇಲೆ) | ಹಾಜರಾಗಿರುತ್ತಾರೆ |
| 6 | ಶ್ರೀ.ಶಾಂತ್‌ಕುಮಾರ್ | ಸದಸ್ಯರು | ಸ್ಯಾನಿಟರಿ ಧಫೇದಾರ್ | ಹಾಜರಾಗಿರುತ್ತಾರೆ |
| 9 | ಶ್ರೀ.ಪಾಪೇಗೌಡ | ಸದಸ್ಯರು | ಗ್ಯಾಂಗ್‌ಮ್ಯಾನ್ | ಹಾಜರಾಗಿರುತ್ತಾರೆ |
| 10 | ಶ್ರೀ.ಸಿ.ನಾರಾಯಣ | ಸದಸ್ಯರು | ಸಾರ್ವಜನಿಕರು | ಹಾಜರಾಗಿರುತ್ತಾರೆ |

ವಾರ್ಡ್ ಕಮಿಟಿ ಸಭೆಯನ್ನು ನಡೆಸುವ ಕುರಿತಾಗಿ ದಿನಾಂಕ:-03-12-2022 ರ ಸಭೆಯ ಸೂಚನಾ ಪತ್ರವನ್ನು ವಾರ್ಡ್ ಸಂಖ್ಯೆ : 161 ಕ್ಕೆ ಸಂಬಂಧಪಟ್ಟ ಎಲ್ಲಾ ಇಲಾಖೆಗಳಿಗೆ ಕಳುಹಿಸಿಕೊಡಲಾಗಿರುತ್ತದೆ ಹಾಗೂ ವಾರ್ಡ್ ಸಂಖ್ಯೆ : 161 ವಾಟ್ಸ್ ಅಫ್ ಗ್ರೂಪ್‌ಗೆ ಸದರಿ ಸಭೆಯ ಸೂಚನಾ ಪತ್ರವನ್ನು ಹಾಕಲಾಗಿರುತ್ತದೆ.

ಸಭೆಯ ಪ್ರಾರಂಭಿಕ ಹಂತದಲ್ಲಿ ವಾರ್ಡ್ ಕಾರ್ಯದರ್ಶಿ ರವರು ಸಭೆಗೆ ಹಾಜರಿದ್ದ ವಾರ್ಡ್ ಸಮಿತಿ ಅಧ್ಯಕ್ಷರು ಹಾಗೂ ಸದಸ್ಯರನ್ನು ಸ್ವಾಗತಿಸಿದರು.

<u>**ಸಭೆಯಲ್ಲಿ ಸಾರ್ವಜನಿಕ ದೂರುಗಳಿಗೆ ಸಂಬಂಧಿಸಿದಂತೆ ಚರ್ಚಿಸಲಾಯಿತು.**</u>

1. **<u>ಕಾಮಗಾರಿ ಇಲಾಖೆ</u>** : 80 ಅಡಿ ರಸ್ತೆ, ಚಂದ್ರ ಲೇಔಟ್ ಇಂದಿರಾ ಕ್ಯಾಂಟೀನ್ ಅಲ್ಲಿ ಬಾಗಿಲುಗಳು ಹಾಳಾಗಿರುವುದಾಗಿ ಅದನ್ನು ಸರಿಪಡಿಸಿಕೊಡುವಂತೆ ಶ್ರೀ.ಮಾರುತಿ.ಪಿ.ಸೇಟ್ ರವರು ತಿಳಿಸಿರುತ್ತಾರೆ. ಈ ಕುರಿತು ಅಗತ್ಯ ಕ್ರಮವಹಿಸುವುದಾಗಿ ನೋಡಲ್ ಅಧಿಕಾರಿಯವರು ಸೂಚಿಸಿರುತ್ತಾರೆ.

   **ಕ್ರಮ** : ಕಾಮಗಾರಿ ಇಲಾಖೆ

2. **ಅರಣ್ಯ ಇಲಾಖೆ** : ೮೦ ಅಡಿ ರಸ್ತೆ, ಚಂದ್ರ ಲೇಔಟ್ ಇಂದಿರಾ ಕ್ಯಾಂಟೀನ್ ಬಳಿ ಒಣಗಿದ ಮರಗಳು ಕೊಂಬೆಗಳು ಹೆಚ್ಚಾಗಿರುತ್ತದೆ ಹಾಗೂ ಹಲವಾರು ಮರಗಳು ವಿದ್ಯುತ್ ತಂತಿಗಳ ಪಕ್ಕದಲ್ಲಿ ಇರುತ್ತದೆ. ಇವುಗಳಲ್ಲಿ ಹಲವಾರು ಮರಗಳು ಸಂಪೂರ್ಣವಾಗಿ ಒಣಗಿದ್ದು ಯಾವುದೇ ಸಮಯದಲ್ಲಿ ಬೀಳುವ ಸಂಭವವಿರುತ್ತದೆ. ಇದರಿಂದಾಗಿ ಸಾರ್ವಜನಿಕರಿಗೆ ತೊಂದರೆಯಾಗುವ ಸಂಭವವಿರುತ್ತದೆ ಎಂದು ಶ್ರೀ.ಸಿ.ನಾರಾಯಣ್ ರವರು ಹಾಗೂ ಸ್ಕೈಲೈನ್ ಅಪಾರ್ಟ್‌ಮೆಂಟ್ ಹತ್ತಿರ ಇರುವ ಒಣಗಿದ ಮರವನ್ನು ಕಟ್ಟುಮಾಡಿ ಅಲ್ಲಿಯೇ ಬಿಟ್ಟಿರುವುದಾಗಿ ಮತ್ತು ಅತ್ತಿಗುಪ್ಪೆ ವ್ಯಾಪ್ತಿಯಲ್ಲಿ ಒಣಗಿದ ಮರಗಳನ್ನು ಕಟಾವು ಮಾಡುವಂತೆ ಶ್ರೀ.ಸ್ವಾಮಿಗೌಡ ರವರು ತಿಳಿಸಿರುತ್ತಾರೆ. ಈ ಕುರಿತು ಅಗತ್ಯ ಕ್ರಮಕೈಗೊಳ್ಳುವುದಾಗಿ ನೋಡೆಲ್ ಅಧಿಕಾರಿಯವರು ತಿಳಿಸಿದರು.

**ಕ್ರಮ** : ಅರಣ್ಯ ಇಲಾಖೆ

ಸಭೆಗೆ ಗೈರು ಹಾಜರಾಗಿರದ ವಿವಿಧ ಇಲಾಖೆಗಳಿಗೆ ಸಂಬಂಧಿಸಿದಂತೆ ಸಭೆಯಲ್ಲಿ ಹಾಜರಿದ್ದ ಸಾರ್ವಜನಿಕರು ತೀವ್ರ ಅಸಮದಾನ ವ್ಯಕ್ತಪಡಿಸಿದ್ದು, ಮುಂದಿನ ಸಭೆಗೆ ಸಾರ್ವಜನಿಕ ಹಿತದೃಷ್ಟಿಯಿಂದ ತಪ್ಪದೆ ಹಾಜರಾಗುವಂತೆ ಸಭೆಯು ತೀರ್ಮಾನಿಸಿರುತ್ತದೆ. ಗೈರು ಅಧಿಕಾರಿಗಳಿಗೆ ಸಂಬಂಧಿಸಿದಂತೆ ಅವರ ಇಲಾಖೆಗಳ ಮೇಲಾಧಿಕಾರಿಗಳಿಗೆ ವರದಿ ಮಾಡಲಾಗುವುದೆಂದು ನೋಡಲ್ ಅಧಿಕಾರಿಯವರು ಸೂಚಿಸಿರುತ್ತಾರೆ.

ಅಂತಿಮವಾಗಿ ನೋಡಲ್ ಅಧಿಕಾರಿಯವರು ಮಾತನಾಡಿ ಸಕಾಲದಲ್ಲಿ ಸಾರ್ವಜನಿಕರ ಕುಂದುಕೊರತೆಗಳನ್ನು ಹಾಲಿಸಿ ಸ್ಪಂದಿಸಿ ಪರಿಹರಿಸಲು ಕ್ರಮತೆಗೆದುಕೊಂಡು ಸಂಬಂಧಪಟ್ಟ ಇಲಾಖೆಗಳು ಸಮನ್ವತೆಯಿಂದ ಕೆಲಸ ನಿರ್ವಹಿಸಲು ಸೂಚಿಸಿರುತ್ತಾರೆ.

ವಂದನಾರ್ಪಣೆಯೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

**ನೋಡಲ್ ಅಧಿಕಾರಿರವರ ಆದೇಶದ ಮೇರೆಗೆ**

**ಕಾರ್ಯದರ್ಶಿ**

**ವಾರ್ಡ್ ಸಂಖ್ಯೆ : 161 ಅತ್ತಿಗುಪ್ಪೆ**

**ಪ್ರತಿಯನ್ನು:-**

1. ಜಂಟಿ ಆಯುಕ್ತರು (ದಕ್ಷಿಣ) ರವರ ಅವಗಾಹನೆಗಾಗಿ ಸಲ್ಲಿಸಲಾಗಿದೆ.
2. ಮುಖ್ಯ ಅಭಿಯಂತರರು (ದಕ್ಷಣ) ರವರ ಅವಗಾಹನೆಗಾಗಿ ಸಲ್ಲಿಸಲಾಗಿದೆ.
3. ಕಾರ್ಯಪಾಲಕ ಅಭಿಯಂತರರು, ವಿಜಯನಗರ ವಿಭಾಗ ರವರ ಅವಗಾಹನೆಗಾಗಿ ಸಲ್ಲಿಸಲಾಗಿದೆ.
4. ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು, ಗಾಳಿ ಆಂಜನೇಯ ಸ್ವಾಮಿ ದೇವಸ್ಥಾನ ಉಪ ವಿಭಾಗ ರವರ ಅವಗಾಹನೆಗಾಗಿ ಸಲ್ಲಿಸಲಾಗಿದೆ.
5. ಕಛೇರಿ ಕಡತಕ್ಕಾಗಿ.